**ಹೆಚ್ಚುವರಿ ಸಿವಿಲ್ ಹಾಗೂ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಯಾದಗಿರಿ.**

**ಉಪಸ್ಥಿತರುಃ- ಶ್ರೀ ರಾಹುಲ ಚಾಂಭಾರ ಬಿ.ಎ.ಎಲ್.ಎಲ್.ಬಿ**
**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ಯಾದಗಿರಿ,**

**ಸಿ.ಸಿ. ನಂಃ 1234/2024**

**ಫಿರ್ಯಾಧಿದಾರಃ ಕರ್ನಾಟಕ ಸರ್ಕಾರದ ಪರವಾಗಿ ಯಾದಗಿರಿ (ಗ್ರಾ) ಪೊಲೀಸ್ ಠಾಣೆ**

**// ವಿರುದ್ದ //**

**ಆರೋಪಿ ಃ ಶರಣರೆಡ್ಡಿ ಮತ್ತು ಇತರರು.**

**ದೋಷಾರೋಪಣೆ**

ನಾನುಃ **ಶ್ರೀ ರಾಹುಲ ಚಾಂಭಾರ ಬಿ.ಎ.ಎಲ್.ಎಲ್.ಬಿ** ಹೆಚ್ಚುವರಿ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ಯಾದಗಿರಿ ಆದ ನಾನು ಆರೋಪಿಗಳಾದ

| | |
|---|---|
| ಆರೋಪಿ 1. | ಶರಣರೆಡ್ಡಿ ತಂದೆ ಸುಭಾಸಚಂದ್ರರೆಡ್ಡಿ ಆರಕೋಟಿ, ವಃ 35 ವರ್ಷ,<br>ಸಾಃ ಕೊಡ್ಲಾ ತಾಃ ಸೇಡಂ ಜಿಃ ಕಲಬುರಗಿ. |
| 2. | ವೀಣಾ ಗಂಡ ಶಾಂತಗೌಡ ಪಾಟೀಲ, ವಃ 35 ವರ್ಷ,<br>ಸಾಃ ಕಟಗಿಶಹಾಪೂರ ತಾಃ ಜಿಃ ಯಾದಗಿರಿ. |
| 3. | ಶರಣಮ್ಮ ಗಂಡ ಸುಭಾಸಚಂದ್ರರೆಡ್ಡಿ, ವಃ 70 ವರ್ಷ,<br>ಸಾಃ ಕೊಡ್ಲಾ ತಾಃ ಸೇಡಂ ಜಿಃ ಕಲಬುರಗಿ. |

**ನಿಮ್ಮ ವಿರುದ್ಧ ದೋಷಿಸುವ ದೋಷಾರೋಪಣೆ ಏನೆಂದರೆ,**

ಮೊದಲನೆಯದಾಗಿ ದಿನಾಂಕಃ 21-03-2024 ರಂದು ಮದ್ಯಾಹ್ನ 01-00 ಗಂಟೆಗೆ ಯಾದಗಿರಿ (ಗ್ರಾ) ಪೋಲಿಸ್ ಠಾಣೆ ಸರಹದ್ದಿಲ್ಲಿ ಬರುವ ಕಟಗಿಶಹಾಪುರ ಗ್ರಾಮದ

ಫಿರ್ಯಾದಿಯ ಮನೆಯ ಹತ್ತಿರ ಚಾಸಾ:1 ರವರು ಅವರಿಗೆ ತಾನು ಎಷ್ಟು ಜಾಗ ಕೊಟ್ಟಿರುವ ಜಾಗದಲ್ಲಿ ಕಂಪೌಂಡ ಕಟ್ಟಿಕೋಳ್ಳಿರಿ ಬೇರೆಯವ ಜಾಗದಲ್ಲಿ ಕಂಪೌಂಡ ಕಟ್ಟಬೇಡಿರಿ ಅಂತಾ ಹೇಳಿದರೆ ಆರೋಪಿತರಾದ ನೀನು ಚಾಸಾ:1 ರವರಿಗೆ ಲೇ ಸೂಳೆ ಮಗನೆ ನಿನ್ನ ಸೊಕ್ಕು ಬಹಳ ಆಗಿದೆ ನಮಗೆ ಜಾಗ ಮಾರಿ ನೀನು ನಮಗೆ ಕಂಪೌಂಡ ಕಟ್ಟಿಗಕೊಳ್ಳುವುದು ಬೇಡ ಅಂತಿ ಸುಳೆ ಮಗನೆ ಅಂತಾ ಅವಾಚ್ಯ ಶಬ್ದಗಳಿಂದ ಬೈದಿದ್ದು, ಈ ಮೂಲಕ ನೀವು ಭಾ.ದಂ.ಸಂ. 504 ಸಹ ಕಲಂ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

2. ಈ ಮೇಲೆ ಹೇಳಿದ ದಿನಾಂಕ, ಸಮಯ ಸ್ಥಳ ಮತ್ತು ಸಂದರ್ಭದಲ್ಲಿ ಆರೋಪಿತರಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶದಿಂದ 1 ನೇ ಆರೋಪಿಯಾದ ನೀನು ಚಾಸಾ:1 ರವರಿಗೆ ಕಲ್ಲಿನಿಂದ ಮೊಣಕಾಲಿಗೆ ಹೊಡೆದು ರಕ್ತಗಾಯ ಮಾಡಿದ್ದು, ಈ ಮೂಲಕ ಭಾ. ದಂ. ಸಂ. ಕಲಂ 324 ಸಹ ಕಲಂ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

3. ಈ ಮೇಲೆ ಹೇಳಿದ ದಿನಾಂಕ, ಸಮಯ ಸ್ಥಳ ಮತ್ತು ಸಂದರ್ಭದಲ್ಲಿ ಆರೋಪಿತರಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶದಿಂದ 1 ನೇ ಆರೋಪಿಯಾದ ನೀನು ಚಾಸಾ:1 ರವರಿಗೆ ಕೈಯಿಂದ ದಬ್ಬಿಸಿಕೊಟ್ಟ ನೆಲಕ್ಕೆ ಬಿಳಿಸಿ ಕಾಲಿನಿಂದ ಒದಿದ್ದು, ಈ ಮೂಲಕ ಭಾ. ದಂ. ಸಂ. ಕಲಂ 323 ಸಹ ಕಲಂ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

4. ಈ ಮೇಲೆ ಹೇಳಿದ ದಿನಾಂಕ, ಸಮಯ ಸ್ಥಳ ಮತ್ತು ಸಂದರ್ಭದಲ್ಲಿ ಆರೋಪಿತರಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶದಿಂದ ಆರೋಪಿತರಾದ ನೀವು ಏ ಸೂಳೆ ಮಗನೆ ನೀನೇನಾದರು ಈ ಜಾಗದ ತಂಟೆಗೆ ಬಂದರೆ ಖಲಾಸ ಮಾಡುತ್ತೇವೆ ಅಂತಾ ಜೀವ ಬೆದರಿಕೆ ಹಾಕಿದ್ದು, ಈ ಮೂಲಕ ಭಾ. ದಂ. ಸಂ. ಕಲಂ 506 ಸಹ ಕಲಂ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

(ಮೇಲ್ಕಾಣಿಸಿದ ದೋಷಾರೋಪಣೆಯನ್ನು ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಿ ತೆರೆದ ನ್ಯಾಯಾಲಯದಲ್ಲಿ ದೋಷಾರೋಪಣೆಯನ್ನು ಆರೋಪಿತರಿಗೆ ತಿಳಿಯವ ಭಾಷಯಲ್ಲಿ ಓದಿ ಹೇಳಲಾಯಿತು)

**ದಿನಾಂಕಃ 10-10-2024**

**ಸ್ಥಳಃ ಯಾದಗಿರಿ**

**ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ**
**ನ್ಯಾಯಾಧೀಶರು ಯಾದಗಿರಿ.**